ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ 301 ಹೈ.ಕ.ಸ್ಥ.ವೃ 2017-18 ವನಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:03.01 .2018

# ಸುತ್ತೋಲೆ

ಭಾರತ ಸಂವಿಧಾನದ ಅನುಚ್ಛೇದ 371 ಜೆ ಅನ್ವಯ ಹೈದ್ರಾಬಾದ್-ಕರ್ನಾಟಕ ಪ್ರದೇಶದ 06 ಜಿಲ್ಲೆಗಳಾದ ಗುಲ್ಬರ್ಗಾ, ಬೀದರ್, ಯಾದಗಿರಿ, ರಾಯಚೂರು, ಕೊಪ್ಪಳ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಮತ್ತು ರಾಜಧಾನಿ ಬೆಂಗಳೂರು ಮಹಾನಗರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ, ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವೃಂದವನ್ನು ರಚಿಸುವ ಕಾರ್ಯ ಪ್ರಾರಂಭಗೊಂಡಿರುತ್ತದೆ. ಆದರೆ ಹೈದ್ರಾಬಾದ್-ಕರ್ನಾಟಕ ಜಿಲ್ಲೆಗಳು ಹಾಗೂ ರಾಜಧಾನಿಯಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕೆಲವು ಬೋಧಕ ಸಿಬ್ಬಂದಿಗಳಿಗೆ ಸಂಬಂಧಿಸಿದ ಮಾಹಿತಿಗಳನ್ನು ಇಎಂಐಎಸ್‌ನಲ್ಲಿ ಈವರೆವಿಗೂ ದಾಖಲಿಸದಿರುವುದು/Update ಮಾಡದಿರುವುದು ಕಂಡು ಬಂದಿರುತ್ತದೆ. ಈ ಕಾರಣದಿಂದಾಗಿ ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವೃಂದ ರಚನಾ ಕಾರ್ಯವನ್ನು ತ್ವರಿತವಾಗಿ ಪೂರೈಸಲು ಸಾಧ್ಯವಾಗುತ್ತಿಲ್ಲ. ಆದುದರಿಂದ ಮೇಲ್ಕಂಡ ಪ್ರದೇಶಗಳಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು ಕೂಡಲೇ ತಮ್ಮ ವೈಯಕ್ತಿಕ ಗಮನವನ್ನು ಹರಿಸಿ 03 ದಿನದೊಳಗಾಗಿ ಇಎಂಐಎಸ್‌ನಲ್ಲಿ ಬೋಧಕರಿಗೆ ಸಂಬಂಧಿಸಿದ ಮಾಹಿತಿಯನ್ನು ದಾಖಲಿಸುವುದು/ Update ಮಾಡುವುದು. ಈ ಬಗ್ಗೆ ಉದಾಸೀನ ತೋರಿದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲು ಕ್ರಮ ವಹಿಸಲಾಗುವುದು.

Smitpow

ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು

ಇವರಿಗೆ,

1. ಹೈದ್ರಾಬಾದ್-ಕರ್ನಾಟಕದ 06 ಜಿಲ್ಲೆಗಳಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
4. ಜಂಟಿನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಗುಲ್ಬರ್ಗಾ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
5. ರಕ್ಷಾ ಕಡತ
6. ಕಛೇರಿ ಪ್ರತಿ.

*301 HK Circular.DOC*